# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 565
ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 11.12.2025
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ನವಲಿ ಸಮನಾಂತರ ಜಲಾಶಯವು ರಾಯಚೂರು, ಕೊಪ್ಪಳ ಹಾಗೂ ಬಳ್ಳಾರಿ ಜಿಲ್ಲೆಯ ಸ್ಥಳೀಯ ರೈತರಿಗೆ ನೀರಾವರಿ ಸೌಲಭ್ಯ ಒದಗಿಸುವ ಪ್ರಮುಖ ಯೋಜನೆಯಾಗಿದ್ದು, ಇದರ ಪೂರ್ಣಗೊಳ್ಳುವಿಕೆಯಿಂದ ಹಲವಾರು ಹಳ್ಳಿಗಳ ಕೃಷಿಗೆ ಶಾಶ್ವತ ನೀರಾವರಿ ಹಾಗೂ ಜನ-ಜಾನುವಾರುಗಳಿಗೆ ಕುಡಿಯುವ ನೀರು ಲಭ್ಯವಾಗಲಿದ್ದು ಈ ಕಾಮಗಾರಿಯು ದೀರ್ಘ ಕಾಲದಿಂದ ಸ್ಥಗಿತವಾಗಿರುವುದರಿಂದ ಇದರ ಪ್ರಗತಿ ಕುರಿತು ಸ್ಥಳೀಯ ರೈತರಲ್ಲಿ ಚಿಂತೆಯಿರುವುದು ಸರ್ಕಾರದ ಗಮನದಲ್ಲಿದೆಯೇ; | ಗಮನಕ್ಕೆ ಬಂದಿದೆ.<br>ತುಂಗಭದ್ರಾ ಜಲಾಶಯದಲ್ಲಿ ತುಂಬಿರುವ ಹೂಳಿನಿಂದಾಗಿ ಉಂಟಾಗಿರುವ ಸಂಗ್ರಹಣೆಯಲ್ಲಿನ ಕೊರತೆಯನ್ನು ನೀಗಿಸಲು ಪರ್ಯಾಯ ಮಾರ್ಗೋಪಾಯವಾಗಿ ಕೊಪ್ಪಳ ಜಿಲ್ಲೆಯ ನವಲಿ ಗ್ರಾಮದ ಹತ್ತಿರ ಸಮತೋಲನಾ ಜಲಾಶಯ ನಿರ್ಮಿಸುವ ಯೋಜನೆಯನ್ನು ರೂಪಿಸಲಾಗಿದೆ.<br>2021-22ನೇ ಸಾಲಿನ ಏಕರೂಪ ದರಪಟ್ಟಿಯನ್ವಯ ಸಿದ್ಧಪಡಿಸಿರುವ ಸದರಿ ಯೋಜನೆಯ ರೂ.15,601.00 ಕೋಟಿ ಮೊತ್ತದ ವಿವರವಾದ ವರದಿಯನ್ನು ತುಂಗಭದ್ರಾ ಮಂಡಳಿಗೆ ಫೆಬ್ರುವರಿ-2024ರಲ್ಲಿ ಸಲ್ಲಿಸಲಾಗಿದ್ದು, ದಿನಾಂಕ:22.11.2024ರಂದು ನಡೆದ ತುಂಗಭದ್ರಾ ಮಂಡಳಿಯ ಸಭೆಯಲ್ಲಿ ಸದರಿ ವಿಷಯದ ಚರ್ಚೆಯಾಗಿರುತ್ತದೆ. ಈ ಯೋಜನೆಗೆ ಮೂರು ರಾಜ್ಯಗಳ ಒಪ್ಪಿಗೆಯು ಅತ್ಯಗತ್ಯವೆಂದು ಮಂಡಳಿಯು ಅಭಿಪ್ರಾಯಿಸಿದ್ದು, ತೆಲಂಗಾಣ ಮತ್ತು ಆಂಧ್ರಪ್ರದೇಶ ರಾಜ್ಯಗಳ ಅಭಿಪ್ರಾಯ/ಪ್ರತಿಕ್ರಿಯೆಗಳನ್ನು ಪರಿಶೀಲಿಸಿ, ಮುಂದಿನ ಸಭೆಗಳಲ್ಲಿ ಈ ವಿಷಯವನ್ನು ಚರ್ಚಿಸಲು ತೀರ್ಮಾನಿಸಲಾಗಿದೆ.<br>ಮುಂದುವರೆದು, ಸದರಿ ಯೋಜನೆ ಕುರಿತು ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಸಹಮತ ಪಡೆಯುವ ವಿಷಯವಾಗಿ ಉನ್ನತ ಮಟ್ಟದ ಅಧಿಕಾರಿಗಳೊಂದಿಗೆ ಚರ್ಚಿಸಲು ಸಭೆ ನಡೆಸುವ ಸಂಬಂಧ ಈ ರಾಜ್ಯಗಳೊಂದಿಗೆ ಪತ್ರ ವ್ಯವಹಾರ ನಡೆಸಲಾಗುತ್ತಿದ್ದು, ಪ್ರತಿಕ್ರಿಯೆ ನಿರೀಕ್ಷಿಸಲಾಗಿದೆ. |
| ಆ) | ನವಲಿ ಸಮನಾಂತರ ಜಲಾಶಯ ನಿರ್ಮಾಣ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ: | |
| ಇ) | ಕಾಮಗಾರಿಯ ಒಟ್ಟು ಅಂದಾಜು ವೆಚ್ಚ ಎಷ್ಟು; ಇದುವರೆಗೆ ಎಷ್ಟು ಹಣ ಖರ್ಚಾಗಿದೆ | |
| ಈ) | ಕಾಮಗಾರಿಯಲ್ಲಿ ಭೂಸ್ವಾಧೀನ ಭೂ ಪರಿಹಾರ ಮತ್ತು ಪುನರ್ವಸತಿ ಸಂಬಂಧಿತ ಯಾವುದಾದರೂ ಕೆಲಸಗಳು ಬಾಕಿಯಿವೆಯೇ: | ತುಂಗಭದ್ರಾ ಯೋಜನೆಯು ಅಂತರ ರಾಜ್ಯ ಯೋಜನೆಯಾಗಿರುವುದರಿಂದ, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಒಪ್ಪಿಗೆ/ಸಹಕಾರ ಮತ್ತು ತುಂಗಭದ್ರಾ ಮಂಡಳಿಯ ಸಹಮತ ಪಡೆದು, ಸಕ್ಷಮ ಪ್ರಾಧಿಕಾರದ ಅನುಮೋದನೆಯೊಂದಿಗೆ ನವಲಿ ಸಮತೋಲನ ಜಲಾಶಯ ನಿರ್ಮಾಣ ಯೋಜನೆಯನ್ನು ಅನುಷ್ಠಾನಗೊಳಿಸಬೇಕಾಗಿದ್ದು, ಇದೂವರೆಗೆ ಭೂಸ್ವಾಧೀನ ಪ್ರಕ್ರಿಯೆ/ ಕಾಮಗಾರಿ ಪ್ರಾರಂಭಿಸಿರುವುದಿಲ್ಲ. |
| ಉ) | ಸದರಿ ಕಾಮಗಾರಿಯನ್ನು ಸರ್ಕಾರದಿಂದ ಪೂರ್ಣಗೊಳಿಸುವ ಗುರಿ ಯಾವ ವರ್ಷಕ್ಕೆ ನಿಗದಿಯಾಗಿದೆ? | |

ಸಂಖ್ಯೆ:ಜಸಂಇ 159 ಎಂಎಲ್ಎ 2025

(ಡಿ.ಕೆ.ಶಿವಕುಮಾರ್)
ಉಪ ಮುಖ್ಯಮಂತ್ರಿ.